## ಕರ್ನಾಟಕ ಸರ್ಕಾರ

ಸಂ:ಸಕನಿ/ಸಿಬ್ಬಂದಿ 3/ಸಿಆರ್-49/2021-22

ಸಮಾಜ ಕಲ್ಯಾಣ ಆಯುಕ್ತರ ಕಛೇರಿ.
5ನೇ ಮಹಡಿ, ಬಹುಮಹಡಿಗಳ ಕಟ್ಟಡ,
ಬೆಂಗಳೂರು, ದಿನಾಂಕ: 09-02-2022

### ಅಧಿಕೃತ ಜ್ಞಾಪನ

**ವಿಷಯ :** ಸಮಾಜ ಕಲ್ಯಾಣ ಇಲಾಖೆಯ ಗ್ರೂಪ್-ಸಿ ವೃಂದದ ವಾಹನ ಚಾಲಕರ ಹುದ್ದೆಗೆ ಸಂಬಂಧಿಸಿದಂತೆ ಹೈದ್ರಾಬಾದ್-ಕರ್ನಾಟಕ ಸ್ಥಳೀಯ ವೃಂದ ಹಾಗೂ ಉಳಿಕೆ ಮೂಲ ವೃಂದದ ನೌಕರರ ಅಂತಿಮ ಜೇಷ್ಠತಾ ಪಟ್ಟಿಯನ್ನು ದಿ:01-01-2022 ರಲ್ಲಿದ್ದಂತೆ ಪ್ರಕಟಿಸುವ ಕುರಿತು.

**ಉಲ್ಲೇಖ:** ಈ ಕಛೇರಿ ಸಮ ಸಂಖ್ಯೆ ಅಧಿಕೃತ ಜ್ಞಾಪನ ದಿ:03-01-2022.

*******

ಸಮಾಜ ಕಲ್ಯಾಣ ಇಲಾಖೆಯ ಗ್ರೂಪ್-ಸಿ ವೃಂದದ ವಾಹನ ಚಾಲಕರ ಹುದ್ದೆಯ ನೌಕರರ ತಾತ್ಕಾಲಿಕ ಜೇಷ್ಠತಾ ಪಟ್ಟಿಯನ್ನು ಉಲ್ಲೇಖಿತ ಅಧಿಕೃತ ಜ್ಞಾಪನದಲ್ಲಿ ದಿ:01-01-2022ರಲ್ಲಿದ್ದಂತೆ ಪ್ರಕಟಿಸಿ, ಆಕ್ಷೇಪಣೆ ಸಲ್ಲಿಸಲು ಕಾಲಾವಕಾಶ ನೀಡಲಾಗಿರುತ್ತದೆ.

ನಿಗದಿತ ಅವಧಿಯೊಳಗೆ ಸ್ವೀಕೃತಗೊಂಡಿರುವ ಆಕ್ಷೇಪಣೆಗಳನ್ನು ನಿಯಮಾನುಸಾರ ಪರಿಶೀಲಿಸಿ, ಸೂಕ್ತ ತಿದ್ದುಪಡಿಯೊಂದಿಗೆ ಆಕ್ಷೇಪಣೆಗಳಿಗೆ ಉತ್ತರವನ್ನು ಅನುಬಂಧ-ಅ ರಲ್ಲಿ ನೀಡಲಾಗಿದೆ. ಮುಂದುವರೆದು, ಸಮಾಜ ಕಲ್ಯಾಣ ಇಲಾಖೆಯ ವಾಹನ ಚಾಲಕರ ವೃಂದಕ್ಕೆ ಸಂಬಂಧಿಸಿದಂತೆ ಹುದ್ದೆಗಳ ವಾಸ್ತವಿಕ ಮಾಹಿತಿಯನ್ನು ಅನುಬಂಧ-1 ರ ಭಾಗ-I ರಲ್ಲಿ ಮತ್ತು ಹೈದ್ರಾಬಾದ್-ಕರ್ನಾಟಕ ಸ್ಥಳೀಯ ವೃಂದ ಹಾಗೂ ಉಳಿಕೆ ಮೂಲ ವೃಂದದ ಅಂತಿಮ ಜೇಷ್ಠತಾ ಪಟ್ಟಿಯನ್ನು ಅನುಬಂಧ-1ರ ಭಾಗ-II ರಲ್ಲಿ ದಿ:01-01-2022ರಲ್ಲಿದ್ದಂತೆ ಸಿದ್ದಪಡಿಸಿ, ಸದರಿ ಅಂತಿಮ ಜೇಷ್ಠತಾ ಪಟ್ಟಿಯನ್ನು ಇಲಾಖೆಯ ವೆಬ್‌ಸೈಟ್ **www.sw.kar.nic.in** ನಲ್ಲಿ ಪ್ರಕಟಿಸಲಾಗಿದೆ.

9.2

ಆಯುಕ್ತರು,
ಸಮಾಜ ಕಲ್ಯಾಣ ಇಲಾಖೆ, ಬೆಂಗಳೂರು.

**ಪ್ರತಿಯನ್ನು ಮಾಹಿತಿ ಹಾಗೂ ಸೂಕ್ತ ಕ್ರಮಕ್ಕಾಗಿ:-**

1. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ಸಮಾಜ ಕಲ್ಯಾಣ ಇಲಾಖೆ, ಬೆಂಗಳೂರು.
2. ನಿರ್ದೇಶಕರು, ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆ, ಬೆಂಗಳೂರು.
3. ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು, ಜಿಲ್ಲಾ ಪಂಚಾಯತ್, ಎಲ್ಲಾ ಜಿಲ್ಲೆಗಳು.
4. ನಿರ್ದೇಶಕರು, ಡಾ:ಬಿ.ಆರ್ ಅಂಬೇಡ್ಕರ್ ಸಂಶೋಧನಾ ಸಂಸ್ಥೆ, ಬೆಂಗಳೂರು.

5. ಕಾರ್ಯದರ್ಶಿಗಳು, ಕರ್ನಾಟಕ ರಾಜ್ಯ ಅನುಸೂಚಿತ ಜಾತಿ/ ಅನುಸೂಚಿತ ಬುಡಕಟ್ಟುಗಳ ಆಯೋಗ, ಬೆಂಗಳೂರು.
6. ಮುಖ್ಯ ಆಡಳಿತಾಧಿಕಾರಿಗಳು, ಪರೀಕ್ಷಾ ಪೂರ್ವ ತರಬೇತಿ ಕೇಂದ್ರ, ಬೆಂಗಳೂರು.
7. ಕಾರ್ಯದರ್ಶಿಗಳು, ಸಫಾಯಿ ಕರ್ಮಚಾರಿಗಳ ಆಯೋಗ, ಬೆಂಗಳೂರು.
8. ಜಂಟಿ/ ಉಪ ನಿರ್ದೇಶಕರು, ಸಮಾಜ ಕಲ್ಯಾಣ ಇಲಾಖೆ, ಎಲ್ಲಾ ಜಿಲ್ಲೆಗಳು ರವರಿಗೆ ಇಲಾಖಾ ವೆಬ್‌ಸೈಟ್ ನಲ್ಲಿ ಪ್ರಕಟಿಸಿರುವ ಅಂತಿಮ ಜೇಷ್ಠತಾ ಪಟ್ಟಿಯನ್ನು ಡೌನ್‌ಲೋಡ್ ಮಾಡಿ ಕಛೇರಿ ಸೂಚನಾ ಫಲಕದಲ್ಲಿ ಪ್ರಕಟಿಸಲು ಹಾಗೂ ಸಂಬಂಧಿಸಿದ ಜಿಲ್ಲೆ/ ತಾಲ್ಲೂಕು ಕಛೇರಿಯಿಂದ ಸಂಬಂಧಿಸಿದ ನೌಕರರಿಗೆ ಜಾರಿ ಮಾಡಲು ತಿಳಿಸಿದೆ.
9. ಯೋಜನಾ ಸಮನ್ವಯಾಧಿಕಾರಿಗಳು/ ಜಿಲ್ಲಾ ಪರಿಶಿಷ್ಟ ವರ್ಗಗಳ ಕಲ್ಯಾಣಾಧಿಕಾರಿಗಳು, ಸಂಬಂಧಪಟ್ಟ ಜಿಲ್ಲೆಗಳು.
10. ಸಹಾಯಕ ನಿರ್ದೇಶಕರು (ಗ್ರೇಡ್-1/ ಗ್ರೇಡ್-2), ಸಮಾಜ ಕಲ್ಯಾಣ ಇಲಾಖೆ, ಎಲ್ಲಾ ತಾಲ್ಲೂಕುಗಳು ರವರಿಗೆ.
11. ಕಛೇರಿ ಪ್ರತಿ/ಇತರೆ.